# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 877 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14.03.2025 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿಯಲ್ಲಿ ರಾಜ್ಯದಲ್ಲಿ ಎಷ್ಟು ಗರ್ಭಿಣಿ ಮಹಿಳೆಯರಿಗೆ ಪ್ರಸವ ಪೂರ್ವ ಆರೋಗ್ಯ ತಪಾಸಣೆ ಕೈಗೊಳ್ಳಲಾಗಿದೆ; ಇದರಿಂದ ಎಷ್ಟು ತೀವ್ರ ತಾಪತ್ರಯದ ಗರ್ಭಿಣಿಯರನ್ನು ಗುರುತಿಸಲಾಗಿದೆ. | ಕಳೆದ ಒಂದು ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಡಿಲ್ಲಿ ಒಟ್ಟು 4,96,660 ಗರ್ಭಿಣಿ ಮಹಿಳೆಯರನ್ನು ತಪಾಸಣೆಗೆ ಒಳಪಡಿಸಲಾಗಿದೆ.<br><br>ಕಳೆದ ಒಂದು ವರ್ಷದಲ್ಲಿ ಒಟ್ಟು 88,932 ತಾಪತ್ರಯದ ಗರ್ಭಿಣಿಯರನ್ನು ಗುರುತಿಸಲಾಗಿದೆ. |
| ಆ) | ಕಳೆದ ಒಂದು ವರ್ಷದಲ್ಲಿ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯ ಮೂಲಕ ಎಷ್ಟು ಗರ್ಭಿಣಿ ತಾಯಂದರಿಗೆ ಉತ್ತೇಜಕ ಧನ ಸಹಾಯ ನೀಡಲಾಗಿದೆ; ರಾಜ್ಯ ಸರಕಾರವು ನೀಡಿ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರದ ಪಾಲು ಶೇಕಡ 60 ಹಾಗೂ ರಾಜ್ಯದ ಪಾಲು ಶೇಕಡ 40ರಷ್ಟು ಅನುದಾನ ನೀಡಲಾಗುತ್ತಿದೆ. ಗರ್ಭಿಣಿ/ಬಾಣಂತಿಯರ ಆರೋಗ್ಯ ಮಟ್ಟವನ್ನು ಸುಧಾರಿಸುವ ನಿಟ್ಟಿನಲ್ಲಿ ಗರ್ಭಿಣಿ/ಬಾಣಂತಿಯರಿಗೆ ಉತ್ತೇಜಕ ಧನ ಸಹಾಯ ನೀಡಲಾಗುತ್ತಿದೆ. ಭಾರತ ಸರ್ಕಾರದ NIC ರವರಿಂದ ಪೋರ್ಟಲ್ ಅಭಿವೃದ್ಧಿ ಪಡಿಸಿದ್ದು, ವೆಬ್ ಆಧಾರಿತ ನಿರ್ವಹಣೆ ಮತ್ತು ಮಾಹಿತಿ ವ್ಯವಸ್ಥೆ ಸಾಫ್ಟ್ ವೇರ್ (PMMVY-Soft MIS) ಪೋರ್ಟಲ್ ಮುಖಾಂತರ PFMS ರಡಿ ಫಲಾನುಭವಿಗಳಿಗೆ ಸಹಾಯಧನವನ್ನು ನೇರ ನಗದು ವರ್ಗಾವಣೆ (DBT) ಮೂಲಕ ನೇರವಾಗಿ ಫಲಾನುಭವಿಗಳ ಆಧಾರ ಜೋಡಣೆಯ ಬ್ಯಾಂಕ್ ಖಾತೆಗೆ ಪಾವತಿಸಲಾಗುತ್ತಿದೆ.<br><br>ಕಳೆದ ಒಂದು ವರ್ಷದಿಂದ ಇಲ್ಲಿಯವರೆಗೆ ಪ್ರಧಾನ ಮಂತ್ರಿ ಮಾತೃವಂಧನಾ ಯೋಜನೆಯ ಮೂಲಕ 8,68,573 ಗರ್ಭಿಣಿತಾಯಂದಿರಿಗೆ ಉತ್ತೇಜಕ ಧನ ಸಹಾಯ ನೀಡಲಾಗಿದೆ.<br><br>ರಾಜ್ಯ ಸರ್ಕಾರವು ರೂ.14638.90 ಲಕ್ಷ ಅನುದಾನ ನೀಡಲಾಗಿರುತ್ತದೆ. |
| ಇ) | ಇಂದ್ರಧನುಷ್ ಮಿಷನ್ ಮೂಲಕ ಕಾಯಿಲೆಯಿಂದ ರಕ್ಷಣೆ ಪಡೆಯಲು ಕಳೆದ ಒಂದು ವರ್ಷದಲ್ಲಿ ರಾಜ್ಯದ ಎಷ್ಟು ಗರ್ಭಿಣಿ ಸ್ತ್ರೀಯರಿಗೆ ಮತ್ತು ಮಕ್ಕಳಿಗೆ ಲಸಿಕೆಯನ್ನು ನೀಡಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕಳೆದ ಒಂದು ವರ್ಷದಲ್ಲಿ ರಾಜ್ಯವು ಪರಿಣಾಮಕಾರಿ ಮಿಷನ್ ಇಂದ್ರಧನುಷ್ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದಿಲ್ಲ. |

**ಸಂಖ್ಯೆ: ಆಕುಕ 49 ಎಸ್.ಟಿ.ಕ್ಯೂ. 2025.**

( ದಿನೇಶ್ ಗುಂಡೂರಾವ್ )
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.